# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ – 583105

ಕುಲಸಚಿವರು (ಮೌಲ್ಯಮಾಪನ) | ದೂರವಾಣಿ: 08392-241011


ಸಂಖ್ಯೆ: ವಿಶ್ರೀಕೃವಿಬ/ಪರೀಕ್ಷಾ/ಸ್ನಾತಕ/ಮೌಲ್ಯಮಾಪನ/2018–19/1409 ದಿನಾಂಕ: 27.06.2018

## ಸುತ್ತೋಲೆ

**ವಿಷಯ :** ಮೇ/ಜೂನ್–2018ರ ತಿಂಗಳಿನಲ್ಲಿ ಜರುಗಿದ ಸ್ನಾತಕ ಪದವಿ ಪರೀಕ್ಷೆಗಳ ಮೌಲ್ಯಮಾಪನದ ಪ್ರಯುಕ್ತ ತಮ್ಮ ಮಹಾವಿದ್ಯಾಲಯದ ಅಧ್ಯಾಪಕರನ್ನು ಮೌಲ್ಯಮಾಪನಕ್ಕೆ ಕಳುಹಿಸಿ ಕೊಡುವ ಕುರಿತು.

*****

ಈ ಸುತ್ತೋಲೆಯ ಮೂಲಕ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಎಲ್ಲಾ ಮಹಾವಿದ್ಯಾಲಯದ ಪ್ರಾಂಶುಪಾಲರುಗಳ ಗಮನಕ್ಕೆ ತರಬಯಸುವುದೇನೆಂದರೆ, ಮೇ/ಜೂನ್–2018ರ ತಿಂಗಳಿನಲ್ಲಿ ಜರುಗಿದ ಸ್ನಾತಕ ಪದವಿ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲು ತಮ್ಮ ಮಹಾವಿದ್ಯಾಲಯದಲ್ಲಿರುವ ಅಧ್ಯಾಪಕರಿಗೆ ಈಗಾಗಲೇ ಮೌಲ್ಯಮಾಪನದ ಆದೇಶವನ್ನು ನೀಡಲಾಗಿದೆ. ಆದರೆ, ಅದರಲ್ಲಿ ಕೆಲವು ಅಧ್ಯಾಪಕರು ಮೌಲ್ಯಮಾಪನ ಮಾಡಲು ಇನ್ನು ಹಾಜರಾಗಿರುವುದಿಲ್ಲವೆಂದು ತಿಳಿದು ಬಂದಿದೆ.

ಆದ ಕಾರಣ, ಈಗಾಗಲೇ ನೇಮಿಸಿದ ಕೆಲವು ಅಧ್ಯಾಪಕರು ಮೌಲ್ಯಮಾಪನಕ್ಕೆ ಬಾರದೇ ಇರುವುದರಿಂದ ಮೌಲ್ಯಮಾಪನ ಕಾರ್ಯ ವಿಳಂಬವಾಗಿ, ವಿದ್ಯಾರ್ಥಿಗಳಿಗೆ ಪರೀಕ್ಷಾ ಫಲಿತಾಂಶ ನೀಡಲು ವಿಳಂಬವಾಗುತ್ತದೆ. ಹಾಗೇಯೇ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ತೊಂದರೆಯಾಗುತ್ತದೆ. ಆದ್ದರಿಂದ, ತಮ್ಮ ತಮ್ಮ ಮಹಾವಿದ್ಯಾಲಯದ ಅಧ್ಯಾಪಕರಿಗೆ ಮೌಲ್ಯಮಾಪನಕ್ಕೆ ಕಳುಹಿಸಿ ಕೊಡಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ಮುಂದುವರೆದು, ಒಂದು ವೇಳೆ ಈಗಾಗಲೇ ನೇಮಿಸಿದ ತಮ್ಮ ಮಹಾವಿದ್ಯಾಲಯದ ಅಧ್ಯಾಪಕರು ಮೌಲ್ಯಮಾಪನ ಕಾರ್ಯಕ್ಕೆ ಗೈರು ಹಾಜರಾದರೆ ಹಾಗೂ ವಿದ್ಯಾರ್ಥಿಗಳಿಗೆ ಫಲಿತಾಂಶ ಪ್ರಕಟಿಸಲು ವಿಳಂಬವಾದರೆ ಅದಕ್ಕೆ ಸಂಬಂಧಪಟ್ಟ ಮಹಾವಿದ್ಯಾಲಯದ ಪ್ರಾಂಶುಪಾಲರೇ ಹೊಣೆಗಾರರಾಗುತ್ತಾರೆ. ಅಲ್ಲದೇ, ತಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಫಲಿತಾಂಶವನ್ನು ತಡೆಹಿಡಿಯಲು ಕ್ರಮಕೈಗೊಳ್ಳಲಾಗುವುದು.

27/6/18

ಕುಲಸಚಿವರು (ಮೌಲ್ಯಮಾಪನ)

REGISTRAR (EVAL)
Vijayanagara Sri Krishnadevaraya University,
Jnana Sagar Campus, Vinayakanagar,
Cantonment, BALLARI-583 104.

ಗೆ,

ಎಲ್ಲಾ ಪ್ರಾಂಶುಪಾಲರು, ವಿ.ಶ್ರೀ.ಕೃ. ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲೆಯ ಸ್ನಾತಕ ಮಹಾವಿದ್ಯಾಲಯಗಳು.

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.
2. ಕುಲಸಚಿವರು, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.
3. ಕಛೇರಿ ಪ್ರತಿ.